



ಅರುಣ ಪಿ. ಭಟ್ಟ

# ವಾರಭವಿಷ್ಯ: 1.4.2021ರಿಂದ 7.4.2021ರವರೆಗೆ




ನಿಮ್ಮ ಮಾತಿನ ಜಾಣ್ಮೆ, ಸರಳವಾದ ನಡೆ ನುಡಿಗಳಿಂದ ಜನರ ಪ್ರಶಂಸೆಯನ್ನು ಪಡೆಯಲು ಹೇರಳ ಅವಕಾಶ ಒದಗಿ ಬರುವುದು. ಸಂಗಾತಿಯ ಸಹಕಾರ ದೊರೆಯುವುದು. ಆರ್ಥಿಕ ಸಮಸ್ಯೆ ಕಡಿಮೆ ಆಗುವುದು. ಕಚೇರಿ ಕೆಲಸ ಪ್ರಯತ್ನದಿಂದ ಶುಭ. ಚಿಕ್ಕ ಪ್ರವಾಸ, ಮನೆಯಲ್ಲಿ ಗೊಂದಲ ಪ್ರವೃತ್ತಿ, ಬೇಡದ ವ್ಯಕ್ತಿಗಳ ಆಗಮನ. ತಾಯಿಯ ಆರೋಗ್ಯ ವ್ಯತ್ಯಾಸ. ಶುಭದಿನ 3. ದೇವ್ಯಪರಾದ ಕ್ಷಮಾಪನ ಸ್ತೋತ್ರ ಪಠಣ ಮಾಡಿ.




ಬಹುದಿನಗಳ ಆಕಾಂಕ್ಷೆ ಪೂರ್ಣವಾಗಲು ವೇದಿಕೆ ಸಿದ್ಧವಾಗುವುದು ಕುಟುಂಬಸ್ಥರೊಡನೆ ಪ್ರವಾಸ, ಕ್ಷೇತ್ರದರ್ಶನ. ಅರ್ಧಕ್ಕೆ ನಿಂತ ಮನೆಕೆಲಸ ಚಾಲನೆ ದೊರೆಯುವುದು. ಸಹೋದರರ ಸಹಾಯ ವಾಹನ ಖರಿದಿಗೆ ಉತ್ತಮ. ನಿಮ್ಮ ವೈಯಕ್ತಿಕ ಶ್ರಮದಿಂದ ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ. ಆ ಕಾರಣಕ್ಕಾಗಿ ಹಲವು ಕೆಲಸ ಕಾರ್ಯಗಳನ್ನು ಪೂರೈಸಲಾಗುತ್ತದೆ. ಶುಭದಿನ 6. ವೆಂಕಟೇಶ್ವರ ಪ್ರಾರ್ಥನೆ ಮಾಡಿರಿ.




ಹಣಕಾಸಿನ ಸಂಸ್ಥೆಗಳ ಜತೆಗೆ ಒಪ್ಪಂದ ಮಾಡಿಕೊಳ್ಳುವ ಸಾಧ್ಯತೆ. ನಿಮ್ಮ ವ್ಯಾಪಾರ ಬಲಪಡಿದಲು ಹೆಚ್ಚು ಶ್ರಮ ಹಾಕಲಿದ್ದೀರಿ. ಇದರಿಂದ ನಿಮ್ಮಲ್ಲಿ ಉತ್ಸಾಹ ಮೂಡಲಿದೆ. ಆದರೆ ಈ ಬಲಪಡಿಸುವ ಪ್ರಕ್ರಿಯೆಯಲ್ಲಿ ಹೆಚ್ಚಿನ ಹಣವನ್ನು ಖರ್ಚು ಮಾಡಲಿದ್ದೀರಿ. ಮತ್ತು ಈ ಹಣವನ್ನು ಹೊಂದಿಸುವ ಸಲುವಾಗಿ ಹಣಕಾಸು ಸಂಸ್ಥೆಗಳಿಂದ ಬಂಡವಾಳ ತರಲಿದ್ದೀರಿ. ಶುಭದಿನ 3. ಚಾಮುಂಡಿ ಸ್ತುತಿ ವನದುರ್ಗಾ ಆರಾಧನೆ ಮಾಡಿರಿ.




ವಾರದ ಶುರುವಿನಿಂದಲೇ ಅಂದುಕೊಂಡ ಯೋಜನೆಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಜತೆಗೆ ಕೆಲಸ ಕಾರ್ಯಗಳಲ್ಲಿ ಆಗುತ್ತಿರುವ ಪ್ರಗತಿ ಬಗ್ಗೆ ತೃಪ್ತಿ ಮೂಡುತ್ತದೆ. ನಿಮ್ಮ ಮೇಲಧಿಕಾರಿಗಳಿಗೆ ಕೆಲಸದ ಪ್ರಗತಿ ಬಗ್ಗೆ ವರದಿ ನೀಡುತ್ತೀರಿ. ಆ ಮೂಲಕ ಅವರ ಮೆಚ್ಚುಗೆಯನ್ನು ಪಡೆಯುತ್ತೀರಿ. ಪರಿಣಾಮಕಾರಿ ಕಾರ್ಯ ವೈಖರಿ ಮೆಚ್ಚಿಕೊಳ್ಳುತ್ತಾರೆ. ಶುಭದಿನ 5. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿ.




ಅಂದುಕೊಂಡ ವೇಗದಲ್ಲಿ ಸಂಪತ್ತು ವೃದ್ಧಿ ಆಗುತ್ತಿಲ್ಲ. ನಿಮ್ಮ ಚಿಂತೆಗೆ ಕಾರಣ ಆಗಲಿದೆ. ಆದರೆ ಈ ಅವಧಿಯಲ್ಲಿ ನಿಮಗೆ ಜನ ಬೆಂಬಲ ಸಿಗುತ್ತದೆ. ನಿಮ್ಮ ವಿಶ್ವಾಸಾರ್ಹತೆಯನ್ನು ನಾಶ ಮಾಡುವುದಕ್ಕೆ ವಿರೋಧಿ ಪಾಳಯದವರು ನಿರಂತರವಾಗಿ ಪ್ರಯತ್ನ ಪಡುತ್ತಾರೆ. ಆರೋಗ್ಯದಲ್ಲಿ ಸಮಸ್ಯೆಯಾಗಬಹುದು. ಬರತಕ್ಕ ಬಾಕಿ ನಂತರ ವಾಪಸ್ ಬರುತ್ತದೆ. ಶುಭದಿನ 7. ಚಂಡಿ ಪಾರಾಯಣ ಮಾಡಿರಿ.




ವಾರದ ಶುರುವಿನಿಂದಲೇ ಅಂದುಕೊಂಡ ಯೋಜನೆಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಜತೆಗೆ ಕೆಲಸ ಕಾರ್ಯಗಳಲ್ಲಿ ಆಗುತ್ತಿರುವ ಪ್ರಗತಿ ಬಗ್ಗೆ ತೃಪ್ತಿ ಮೂಡುತ್ತದೆ. ನಿಮ್ಮ ಮೇಲಧಿಕಾರಿಗಳಿಗೆ ಕೆಲಸದ ಪ್ರಗತಿ ಬಗ್ಗೆ ವರದಿ ನೀಡುತ್ತೀರಿ. ಆ ಮೂಲಕ ಅವರ ಮೆಚ್ಚುಗೆಯನ್ನು ಪಡೆಯುತ್ತೀರಿ. ಪರಿಣಾಮಕಾರಿಯಾದ ಕಾರ್ಯ ವೈಖರಿಯನ್ನು ಮೆಚ್ಚಿಕೊಳ್ಳುತ್ತಾರೆ. ಶುಭದಿನ 3. ವಿಷ್ಣು ಸಹಸ್ರನಾಮ ಪಠಿಸಿರಿ.




ನಿರೀಕ್ಷಿತ ಅಧಿಕಾರ ಲಾಭ. ಅಧಿಕಾರಿಗಳಿಗೆ ಪದೋನ್ನತಿಯ ವಾರ. ಬರತಕ್ಕ ಹಣ ಬರುತ್ತದೆ. ಹೆಂಡತಿಯ ತಿರುಗಾಟ. ಆರೋಗ್ಯವಾಗಿರುವಿರಿ. ಕೌಟುಂಬಿಕವಾಗಿ ಅಧಿಕ ಖರ್ಚು. ಕಣ್ಣಿನ ಸಮಸ್ಯೆ ಕಾಣಿಸುವದು. ಉದ್ಯೋಗ ಹಾಗೂ ಆರೋಗ್ಯದಲ್ಲಿ ಆಲಸ್ಯ ನಿಮ್ಮನ್ನು ಕಾಡಬಹುದು. ನಿಮ್ಮ ದೈನಂದಿನ ವ್ಯವಹಾರಗಳಲ್ಲಿ ಏರಿಳಿತಗಳಾಗುತ್ತವೆ. ಶುಭದಿನ 5. ಪುಷ್ಯರಾಗ ರತ್ನ ಧಾರಣೆ ಮಾಡಿರಿ. ರಾಘವೇಂದ್ರ ಸ್ವಾಮಿ ಭಜನೆ ಮಾಡಿರಿ.




ವೈಯಕ್ತಿಕ ಬದುಕು ಉತ್ತಮವಾಗಲಿದೆ. ಶಿಕ್ಷಣ ಕ್ಷೇತ್ರದಲ್ಲಿ ಇರುವವರಿಗೆ ಪ್ರಗತಿ. ಉತ್ಪಾದನೆ, ಕ್ರೀಡೆ ಅಥವಾ ಸೇವಾ ಕ್ಷೇತ್ರದಲ್ಲಿ ತೊಡಗಿಕೊಂಡವರಿಗೆ ಪ್ರಗತಿಗೆ ಹಲವು ಅವಕಾಶಗಳು ದೊರೆಯಲಿವೆ. ಗೃಹ ನಿರ್ಮಾಣ ವಿಚಾರದಲ್ಲಿ ಪ್ರಗತಿ ಆಗಲಿದೆ. ಮನೆಯ ಹಿರಿಯರು ಮೆಚ್ಚುಗೆ ಸೂಚಿಸಲಿದ್ದಾರೆ. ಮಕ್ಕಳು ಮಾಡುವ ಕೆಲಸಗಳಿಂದ ಹೆಮ್ಮೆ ಮೂಡಲಿದೆ. ಶುಭದಿನ 5. ಹನುಮಾನ್ ಚಾಲಿಸ್ ಓದಿರಿ.




ಉದ್ಯೋಗದಲ್ಲಿ ಉತ್ತಮ ಸ್ಥಾನಮಾನ ಸಿಗಲಿದೆ. ಸಹವರ್ತಿಗಳು ನಿಮ್ಮ ಯೋಜನೆಗಳಿಗೆ ಬೆಂಬಲ ನೀಡಲಿದ್ದಾರೆ. ಕಥೆ, ಕವನ ಅಥವಾ ಸಾಹಿತ್ಯ ಚಟುವಟಿಕೆಗಳಲ್ಲಿ ಉತ್ತಮ ಮನ್ನಣೆ ಗಳಿಸಲಿದ್ದೀರಿ. ಕೆಲವು ಅದೃಷ್ಟದ ಭಾಗ್ಯಗಳು ಒದಗಿಬರಲಿದೆ. ದಾಂಪತ್ಯದಲ್ಲಿ ಪ್ರೀತಿಯ ಮನಸ್ಥಿತಿಯಿಂದ ಇರಲಿದ್ದೀರಿ. ಕೋರ್ಟ್ ವ್ಯವಹಾರಗಳು ನಿಮ್ಮ ಪರವಾಗಿ ಆಗುವ ಸಾಧ್ಯತೆ ಇದೆ. ಶುಭದಿನ 7. ಸೌಂದರ್ಯ ಲಹರಿ ಪಠಿಸಿರಿ.




ಸಾಮಾಜಿಕವಾಗಿ, ರಾಜಕೀಯವಾಗಿ ಉತ್ತಮ ಹೆಸರು ಮಾಡಲು ಅದ್ಭುತವಾದ ಅವಕಾಶಗಳು ದೊರೆಯುತ್ತವೆ. ನಿಮ್ಮ ಜನಪ್ರಿಯತೆ ಕೂಡ ಹೆಚ್ಚಾಗಲಿದೆ. ಕೋರ್ಟ್ ವ್ಯಾಜ್ಯಗಳಿಗೆ ಹೆಚ್ಚಿನ ಹಣ ಖರ್ಚು ಮಾಡಬೇಕಾಗುತ್ತದೆ. ಆರೋಗ್ಯವು ಉತ್ತಮವಾಗಿರುತ್ತದೆ. ಕುಟುಂಬ ಸದಸ್ಯರ ಜತೆಗೆ ಹೆಚ್ಚಿನ ಸಮಯ ಕಳೆಯಲು ಸಾಧ್ಯವಾಗುವುದಿಲ್ಲ. ಶುಭದಿನ 5. ಸಂಕಷ್ಟಹರ ಮಹಾಗಣಪತಿ ಪೂಜೆ ಮಾಡಿರಿ.




ಕೌಟುಂಬಿಕ ವಿಚಾರಗಳಿಗಾಗಿ ದೂರ ಪ್ರಯಾಣ ಮಾಡಬೇಕಾಗುತ್ತದೆ. ಕೆಲಸ ಮಾಡುವ ನಿಮ್ಮ ಸಾಮರ್ಥ್ಯ ನಿರಂತರವಾಗಿ ಹೆಚ್ಚಾಗುತ್ತಾ ಸಾಗುತ್ತದೆ. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಅಷ್ಟೇನೂ ಉತ್ತಮವಾಗಿ ಇರುವುದಿಲ್ಲ. ಇದು ನಿಮ್ಮ ಚಿಂತೆಗೆ ಕಾರಣವಾಗಲಿದೆ. ವಾರದ ಮಧ್ಯ ಭಾಗದಲ್ಲಿ ಧಾರ್ಮಿಕ ಕೆಲಸ ಕಾರ್ಯಗಳನ್ನು ಮಾಡಲಿದ್ದೀರಿ. ಶುಭದಿನ 6. ಗಣೇಶಪಂಚರತ್ನ ಸ್ತೋತ್ರ ಪಠಿಸಿರಿ.




ಆದಾಯದಲ್ಲಿ ಹೆಚ್ಚಳ ಆಗುತ್ತಾ ಹೋಗುತ್ತದೆ. ಜೀವನ ಮಟ್ಟ ಉತ್ತಮಗೊಳ್ಳಲಿದೆ. ಈ ವಾರ ಕೆಲವು ಉಪಯುಕ್ತ ಸಂಪನ್ಮೂಲಗಳನ್ನು ಕ್ರೋಢೀಕರಿಸಲು ಸಾಧ್ಯವಾಗುತ್ತದೆ. ಕೆಲವು ಸಂಗತಿಗಳಲ್ಲಿ ವೇಗವನ್ನು ತರುವುದು ಸವಾಲಾಗಿ ಪರಿಣಮಿಸಲಿದೆ. ವಿವಿಧ ಆದಾಯ ಮೂಲಗಳಿಂದ ಅನುಕೂಲ ಒದಗಿ ಬರಲಿದೆ. ಇದರಿಂದ ನಿಮಗೆ ಸಂತೋಷವಾಗುತ್ತದೆ. ಶುಭದಿನ 4. ಶಿವಕವಚ ಪಠಣ ಮಾಡಿರಿ.